# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ, ಹೆಚ್.ಎ.ಎಲ್ ಏರ್‌ಪೋರ್ಟ್

## ಉಪವಿಭಾಗ ಮಹದೇವಪುರ ವಲಯ, ಬೆಂಗಳೂರು

ಸಂಖ್ಯೆ.ಬಿಬಿಎಂಪಿ/ಸ.ಕಾ.ಅ/ಹೆಚ್.ಎ.ಎಲ್/ಪಿಆರ್/ 02 /2022-23 ದಿನಾಂಕ: 09-09-2022

### 02 ನೇ ವಾರ್ಡ್ ಸಮಿತಿ ಸಭೆಯ ನಡಾವಳಿಗಳು.

ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮಾನ್ಯ ಆಯುಕ್ತರು ಕಛೇರಿ ಆದೇಶ ಸಂ: ಬಿ12(5)/ಪಿಆರ್/35/2020-21 ದಿನಾಂಕ:04/04/2022, ಆದೇಶದಂತೆ ದಿನಾಂಕ;04/04/2022 ರಂದು ನೋಡಲ್ ಅಧಿಕಾರಿ ಶ್ರೀ.ಸೋಮಯ್ಯ.ಜಿ.ಡಿ, ಸಹಾಯಕ ಅಭಿಯಂತರು(ವಾರ್ಡ್ ನಂ-91.ಎ.ನಾರಾಯಣಪುರ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,ಇವರ ಅಧ್ಯಕ್ಷತೆಯಲ್ಲಿ ಹೆಚ್.ಎ.ಎಲ್ ಏರ್‌ಪೋರ್ಟ್ ಉಪವಿಭಾಗದ ವಾರ್ಡ್-91 ಎ.ನಾರಾಯಣಪುರದಲ್ಲಿ ದಿನಾಂಕ:09-09-2022ರಂದು ವಾರ್ಡ್ ಕಛೇರಿಯಲ್ಲಿ ವಾರ್ಡ್ ಸಮಿತಿ ನಡೆಸಿದ ಸಭೆಯ ನಡಾವಳಿಗಳು ಈ ಕೆಳಕಂಡಂತೆ ಇರುತ್ತದೆ.

**ಉಪಸ್ಥಿತರು:**

| ಕ್ರ.ಸಂ | ಹೆಸರು | ಹುದ್ದೆ |
|---|---|---|
| | ಅಧಿಕಾರಿಗಳು | |
| 1 | ಶ್ರೀ.ಜಿ.ಡಿ.ಸೋಮಯ್ಯ | ವಾರ್ಡ್ ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ನಂ.56 ಎ.ನಾರಾಯಣಪುರ |
| 2 | ಶ್ರೀ. ಹೆಚ್.ಆರ್.ರವಿ | ಕಂದಾಯ ಪರಿವೀಕ್ಷಕರು |
| 3 | ಶ್ರೀಮತಿ.ಸುವರ್ಣ ಹೆಚ್.ಸಿ | ಕಿರಿಯ ಆರೋಗ್ಯ ನಿರೀಕ್ಷಕರು |
| 4 | ಶ್ರೀಮತಿ. ನಾಗಮಣಿ | ಆರೋಗ್ಯ ನಿರೀಕ್ಷಕರು |
| 5. | ಶ್ರೀಮತಿ.ಡಾ॥ ರಚನ | ಆರೋಗ್ಯ ಅಧಿಕಾರಿ ವಾರ್ಡ್ ನಂ 91 ಪ್ರಾಥಮಿಕ ಆರೋಗ್ಯ ಕೇಂದ್ರ ಎ.ನಾರಾಯಣಪುರ |
| 6 | ಶ್ರೀಮತಿ.ಹಿನಾ | ಕಿರಿಯ ಅಭಿಯಂತರರು, (ಬೆಸ್ಕಾಂ) |
| 7 | ಶ್ರೀ.ಗಂಗಾಧರಪ್ಪ | ಕೆಲಸದ ಪರಿವೀಕ್ಷಕರು |
| 8 | ಶ್ರೀ.ಅಖಿಲ್ | ಡೇಟಾ ಎಂಟ್ರಿ ಆಪರೇಟರ್, ಕಂದಾಯ ಇಲಾಖೆ. |
| 9 | ಶ್ರೀ.ಶಂಕರ್‌ನಾಗ್ | ವಾರ್ಡ್ ಮಾರ್ಷಲ್ |
| | ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು | |
| 10 | ಶ್ರೀ.ಸುರೇಶ್ .ವಿ | ಎ-ನಾರಾಯಣಪುರ |
| 11 | ಶ್ರೀಮತಿ.ಸುಲೇಖ | ಎ-ನಾರಾಯಣಪುರ |
| 12 | ಶ್ರೀ.ಸುನಿಲ್ | ಎ-ನಾರಾಯಣಪುರ |
| 13 | ಶ್ರೀ.ಎ.ಗಣೇಶ್ | ಎ-ನಾರಾಯಣಪುರ |
| 14 | ಶ್ರೀ. ಅರುಣ್ ಕುಮಾರ್ | ಎ-ನಾರಾಯಣಪುರ |
| 15 | ಶ್ರೀ.ರಾಮುಲು ರೆಡ್ಡಿ | ಎ-ನಾರಾಯಣಪುರ |
| 16 | ಶ್ರೀ. ಚಿಟ್ಟಿ | ಎ-ನಾರಾಯಣಪುರ |
| 17 | ಶ್ರೀ. ಶಂಕರ್ | ಎ-ನಾರಾಯಣಪುರ |
| 18 | ಶ್ರೀ.ರಮೇಶ್ | ಎ-ನಾರಾಯಣಪುರ |

<u>ನಡಾವಳಿ 1.</u> ಕೋವಿಡ್-19ರ ಸಾಂಕ್ರಮಿಕ ರೋಗಕ್ಕೆ ಸಂಬಂಧಿಸಿದಂತೆ, ಸಾಂಭಾವ್ಯ ನಾಲ್ಕನೇ ಅಲೆಯನ್ನು ನಿಯಂತ್ರಿಸುವ ಬಗ್ಗೆ ಮತ್ತು ಸೊಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಕ್ರಮಗಳ ಬಗ್ಗೆ.

ಈ ಕುರಿತು ಚರ್ಚಿಸಲಾಗಿ, ವಾರ್ಡ್‌ಗೆ ಸಂಬಂಧಿಸಿದ ಹಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯ ಅಧಿಕಾರಿಗಳು ವಾರ್ಡ್‌ನಲ್ಲಿ ಕೋವಿಡ್-19ರ ಸಾಂಕ್ರಮಿಕ ರೋಗಕ್ಕೆ ಸಂಬಂಧಪಟ್ಟಂತೆ ಆರೋಗ್ಯ ಅಧಿಕಾರಿಗಳು ಕೋವಿಡ್ ಲಸಿಕೆಯನ್ನು 12 ರಿಂದ 14 ವರ್ಷದೊಳಗಿನ ಮಕ್ಕಳಿಗೆ ಎರಡನೇ ಡೋಸ್ ಲಸಿಕೆಯನ್ನು ನೀಡುತ್ತಿರುವುದಾಗಿ ಹಾಗೂ 60 ವರ್ಷ ಮೇಲ್ಪಟ್ಟವರಿಗೆ 80% ಬೂಸ್ಟರ್ ಡೋಸ್ ನೀಡಿರುವುದಾಗಿ ಹಾಗೂ ಕೊವಾಕ್ಸಿನ್ ಲಸಿಕೆಯನ್ನು ಮುಂಬರುವ 20 ದಿನಗಳಲ್ಲಿ ಸ್ಥಗಿತಗೊಳಿಸುತ್ತೇವೆ ಎಂದು ಆರೋಗ್ಯಾಧಿಕಾರಿಗಳು ತಿಳಿಸಿದರು ಈ ಬಗ್ಗೆ ಸೋಂಕು ಹರಡುವುದನ್ನು ತಡೆಗಟ್ಟುವ ಸಲುವಾಗಿ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವಂತೆ ತೀರ್ಮಾನಿಸಿ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಮತ್ತು ಸಂಬಂದಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.

ಕ್ರಮ: ಪ್ರಾಥಮಿಕ ಆರೋಗ್ಯ ಕೇಂದ್ರದ ಅಧಿಕಾರಿಗಳು

**<u>ನಡಾವಳಿ 2.</u> ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿಗಳ ಸಂಬಂಧಿಸಿದ ವಿಷಯಗಳ ಬಗ್ಗೆ.**

ವಾರ್ಡ್ ವ್ಯಾಪ್ತಿಯಲ್ಲಿ ನೀರಿನ ಒತ್ತಡದ ಸಮಸ್ಯೆ ಇರುವುದರಿಂದ ಎತ್ತರ ಪ್ರದೇಶಗಳಿಗೆ ಸರಿಯಾದ ಪ್ರಮಾಣದಲ್ಲಿ ನೀರು ಪೂರೈಕೆಯಾಗುತ್ತಿಲ್ಲವೆಂದು ಸಾರ್ವಜನಿಕರು ಮನವಿ ಮಾಡಿಕೊಂಡರು ಅದರಂತೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರು ಮಾತನಾಡಿ ಸಮಸ್ಯೆಯನ್ನು ಬಗೆಹರಿಸುವುದಾಗಿ ತಿಳಿಸಿದರು.

ಕ್ರಮ: ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರು

**ನಡಾವಳಿ 3.ಬೀದಿ ದೀಪಗಳ ನಿರ್ವಹಣೆ ಬಗ್ಗೆ.**

ವಾರ್ಡ್ ವ್ಯಾಪ್ತಿಯಲ್ಲಿ ಬರುವ ಮೈತ್ರಿ ಸ್ಕೂಲ್ ರಸ್ತೆ ಹಾಗೂ ಮಡೋನಾ ಸ್ಕೂಲ್ ರಸ್ತೆಗಳಲ್ಲಿ ಬೀದಿ ದೀಪಗಳು ಸರ್ಮಪಕವಾಗಿ ಉರುಯುತ್ತಿಲ್ಲವೆಂದು ಸಾರ್ವಜನಿಕರು ತಿಳಿಸಿದರುವ, ಅದರಂತೆ ಕೂಡಲೇ ಕ್ರಮ ವಹಿಸಬೇಕೆಂದು ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

**<u>ನಡಾವಳಿ 4.</u>ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ .**

ವಾರ್ಡ್‌ನ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಚರ್ಚಿಸಲಾಗಿದ್ದು.ವಾರ್ಡ್ ವ್ಯಾಪ್ತಿಯ ನೇತ್ರಾವತಿ ರಸ್ತೆಯಲ್ಲಿ ರಸ್ತೆ ಕಾಮಗಾರಿ ಮತ್ತು ಚರಂಡಿಯ ಕಾಮಗಾರಿಯನ್ನು ಅರ್ಧಕ್ಕೆ ಸ್ಥಗಿತಗೊಳಿಸಿದು ಪ್ರಾರಂಭಿಸುವಂತೆ ಸಾರ್ವಜನಿಕರು ಒತ್ತಾಯಿಸಿದರು, ಅದರಂತೆ ಸಾರ್ವಜನಿಕರ ಸಮಸ್ಯೆಗಳನ್ನು ಬಗೆಹರಿಸುವಂತೆ ಸಂಬಂಧಪಟ್ಟ ಅಭಿಯಂತರರಿಗೆ ಸೂಚಿಸಲಾಯಿತು.

ಕ್ರಮ: ಸಹಾಯಕ ಅಭಿಯಂತರರು ವಾರ್ಡ್ 91

**<u>ನಡಾವಳಿ 5.</u> ಇನ್ನಿತರೆ ವಿಷಯಗಳ ಬಗ್ಗೆ.**

ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರು ಸಂಚರಿಸಲು ಬಿ.ಎಂ.ಟಿ.ಸಿ ಬಸ್ಸು ಸಂಚಾರ ಇಲ್ಲದಿರುವ ಕಾರಣ ಮುಖ್ಯರಸ್ತೆಯಿಂದ ಒಳಗಡೆ ಇರುವ ಪ್ರದೇಶದಲ್ಲಿರುವ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಕಾರಣ ಬಿ.ಎಂ.ಟಿ.ಸಿ ಬಸ್ಸು ಸಂಚಾರ ಕಲ್ಪಿಸಿಕೊಡಬೇಕೆಂದು ಸಾರ್ವಜನಿಕರು ತಿಳಿಸಿದರು.

ಕ್ರಮ: ಸಹಾಯಕ ಅಭಿಯಂತರರು ವಾರ್ಡ್ 91

ನೋಡಲ್ ಅಧಿಕಾರಿ ಹಾಗೂ ಸದಸ್ಯ ಕಾರ್ಯದರ್ಶಿ
ಸಹಾಯಕ ಅಭಿಯಂತರರು ವಾರ್ಡ್ ನಂ.91
ಎ.ನಾರಾಯಣಪುರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ಪ್ರತಿಯನ್ನು:-

1. ಮಾನ್ಯ ಜಂಟಿ ಆಯುಕ್ತರು, ಮಹದೇವಪುರ ವಲಯ ರವರ ಮಾಹಿತಿಗಾಗಿ ರವಾನಿಸಿದೆ.
2. ಮುಖ್ಯ ಅಭಿಯಂತರರು, ಮಹದೇವಪುರ ವಲಯ ರವರ ಮಾಹಿತಿಗಾಗಿ ರವಾನಿಸಿದೆ.
3. ಕಛೇರಿ ಪ್ರತಿ.